## ಕೆ.ಆರ್.ಪುರ– ಕೆಐಎ 2ಬಿ ರೀಚ್ ಮೆಟ್ರೊ ಮಾರ್ಗದ ನಿರ್ಮಾಣ ಕಾರ್ಯ ಚುರುಕು

# ಹೆಚ್ಚುವರಿ ಭೂಸ್ವಾಧೀನಕ್ಕೆ ಹಸಿರು ನಿಶಾನೆ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** 'ನಮ್ಮ ಮೆಟ್ರೊ' ಎರಡನೇ ಹಂತದಲ್ಲಿ ಕೆ.ಆರ್.ಪುರ ಮೆಟ್ರೊ ನಿಲ್ದಾಣದಿಂದ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದವರೆಗಿನ ಮೆಟ್ರೊ ಮಾರ್ಗ (2ಬಿ ರೀಚ್) ನಿರ್ಮಾಣಕ್ಕೆ ಅಗತ್ಯವಿದ್ದ ಹೆಚ್ಚುವರಿ ಭೂಮಿ ಸ್ವಾಧೀನಕ್ಕೆ ರಾಜ್ಯ ಸರ್ಕಾರ ಹಸಿರು ನಿಶಾನೆ ನೀಡಿದೆ. 3,723 ಚ.ಮೀ. ವಿಸ್ತೀರ್ಣದ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲು ಬೆಂಗಳೂರು ಮೆಟ್ರೊ ರೈಲು ನಿಗಮ (ಬಿಎಂಆರ್‌ಸಿಎಲ್) ಮುಂದಾಗಲಿದೆ.

ಕೆ.ಆರ್.ಪುರ ಮೆಟ್ರೊ ನಿಲ್ದಾಣದಿಂದ ಹೆಬ್ಬಾಳ ಮಾರ್ಗವಾಗಿ ವಿಮಾನ ನಿಲ್ದಾಣದವರೆಗೆ ಮೆಟ್ರೊ ರೈಲು ಮಾರ್ಗ ನಿರ್ಮಾಣಗೊಳ್ಳಲಿದೆ.

ಒಟ್ಟು ₹10,584 ಕೋಟಿ ವೆಚ್ಚದ ಈ ಮಾರ್ಗ ನಿರ್ಮಾಣಕ್ಕೆ ಭೂಸ್ವಾಧೀನ ಕಾರ್ಯ ಮುಗಿಯುವ ಹಂತಕ್ಕೆ ಬಂದಿದೆ. ಅಗತ್ಯವಿದ್ದ ಹೆಚ್ಚುವರಿ ಭೂಮಿಯ ಸ್ವಾಧೀನಕ್ಕೂ ಈಗ ಅನುಮತಿ ದೊರೆತಿರುವುದು ಮಾರ್ಗದ ನಿರ್ಮಾಣ ಕಾರ್ಯ ಚುರುಕು ಪಡೆಯಲಿದೆ.

ಬೈಯಪ್ಪನಹಳ್ಳಿಯಿಂದ ವೀರಣ್ಣನಪಾಳ್ಯದವರೆಗೆ ಮೆಟ್ರೊ ರೈಲು ಮಾರ್ಗದ ನಿರ್ಮಾಣದ ಉದ್ದೇಶಕ್ಕಾಗಿ ಹೆಚ್ಚುವರಿ ಭೂಮಿ ಬೇಕಾಗಿದ್ದು, ಬೆಂಗಳೂರು ಪೂರ್ವ ತಾಲ್ಲೂಕಿನ ಬೆನ್ನಿಗಾನಹಳ್ಳಿ, ಕೆ.ಜಿ. ಬಾಣಸವಾಡಿ, ಹೊರಮಾವು, ಬೆಂಗಳೂರು ಉತ್ತರ ತಾಲ್ಲೂಕಿನ ಹೆಣ್ಣೂರು, ನಾಗವಾರದಲ್ಲಿ ಭೂಮಿಯನ್ನು ಸ್ವಾಧೀನ ಮಾಡಿಕೊಳ್ಳಲಾಗುತ್ತದೆ.

'ಈ ಮಾರ್ಗಕ್ಕಾಗಿ ಸರ್ಕಾರದ 58 ಹಾಗೂ 203 ಖಾಸಗಿ ಆಸ್ತಿ ಸೇರಿ ಒಟ್ಟು 261 ಆಸ್ತಿಗಳನ್ನು ಸ್ವಾಧೀನ ಪಡಿಸಿಕೊಳ್ಳಬೇಕಾಗಿತ್ತು. ಕಳೆದ ಮಾರ್ಚ್‌ವರೆಗೆ ಒಟ್ಟು 190 ಆಸ್ತಿಗಳನ್ನು ಸ್ವಾಧೀನ ಮಾಡಿಕೊಳ್ಳಲಾಗಿದೆ. ಈ ಪ್ರಕ್ರಿಯೆ ಮುಗಿದ ನಂತರ ಹೆಚ್ಚುವರಿ ಭೂಮಿಯ ಸ್ವಾಧೀನ ಕಾರ್ಯ ಪ್ರಾರಂಭಿಸಲಾಗುವುದು' ಎಂದು ಬಿಎಂಆರ್‌ಸಿಎಲ್ ಭೂಸ್ವಾಧೀನ ವಿಭಾಗದ ಪ್ರಧಾನ ವ್ಯವಸ್ಥಾಪಕ ಚನ್ನಪ್ಪಗೌಡರ್ ಅವರು 'ಪ್ರಜಾವಾಣಿ'ಗೆ ತಿಳಿಸಿದರು.

'ಹೆಚ್ಚುವರಿ ಭೂಮಿಯ ಸ್ವಾಧೀನ ಕಾರ್ಯ ಪೂರ್ಣಗೊಂಡರೆ, ಈ ಮಾರ್ಗದ ಭೂಸ್ವಾಧೀನ ಕಾರ್ಯ ಸಂಪೂರ್ಣವಾಗಿ ಮುಗಿದಂತಾಗುತ್ತದೆ' ಎಂದು ಅವರು ಹೇಳಿದರು.

**ಬಹುನಿರೀಕ್ಷಿತ ಮಾರ್ಗ:** ಬೆಂಗಳೂರು ಹೊರವರ್ತುಲದ ಪ್ರಮುಖ ಪ್ರದೇಶಗಳನ್ನು ಸಂಪರ್ಕಿಸುವ ಇದು ಬಹುನಿರೀಕ್ಷಿತ ಮಾರ್ಗ. ಈ ಭಾಗದಲ್ಲಿನ ಸಂಚಾರ ದಟ್ಟಣೆಯ ಸಮಸ್ಯೆಗೂ 'ಮೆಟ್ರೊ ರೈಲು' ದೊಡ್ಡ ಪರಿಹಾರ ನೀಡಲಿದೆ ಎಂಬ ನಿರೀಕ್ಷೆ ಇಲ್ಲಿನ ಜನರದ್ದು. 2024ರ ವೇಳೆಗೆ ಈ ಮಾರ್ಗದ ನಿರ್ಮಾಣ ಕಾರ್ಯ ಪೂರ್ಣಗೊಳ್ಳುವ ನಿರೀಕ್ಷೆ ಇದೆ ಎಂದು ಬಿಎಂಆರ್‌ಸಿಎಲ್ ಹೇಳಿದೆ.


**ಹೆಚ್ಚುವರಿ ಭೂಮಿ ಸ್ವಾಧೀನದ ವಿವರ**

| ಗ್ರಾಮದ ಹೆಸರು | ವಿಸ್ತೀರ್ಣ (ಚ.ಮೀ.ಗಳಲ್ಲಿ) |
|---|---|
| ಬೆನ್ನಿಗಾನಹಳ್ಳಿ | 2048.88 |
| ಕೆ.ಜಿ. ಬಾಣಸವಾಡಿ | 1,221.88 |
| ಹೊರಮಾವು | 163.43 |
| ಹೆಣ್ಣೂರು | 90.10 |
| ನಾಗವಾರ | 198.88 |
| ಒಟ್ಟು | 3723.17 |

₹10,584 ಕೋಟಿ — ಕೆ.ಆರ್.ಪುರ–ಕೆಐಎ ಮಾರ್ಗ ನಿರ್ಮಾಣದ ಅಂದಾಜು ವೆಚ್ಚ

38 ಕಿ.ಮೀ. — ಈ ಮಾರ್ಗದ ಉದ್ದ

17 — ಈ ಮಾರ್ಗದಲ್ಲಿ ನಿರ್ಮಾಣಗೊಳ್ಳಲಿರುವ ನಿಲ್ದಾಣಗಳು





ಕೆ.ಆರ್.ಪುರದಲ್ಲಿ ಮೆಟ್ರೊ ನಿಲ್ದಾಣ ನಿರ್ಮಾಣ ಕಾಮಗಾರಿ ಭರದಿಂದ ಸಾಗಿದೆ —ಪ್ರಜಾವಾಣಿ ಚಿತ್ರ: ಎಂ.ಎಸ್. ಮಂಜುನಾಥ್

## ಬಸ್ ಪಾಸ್ ಹಣ ದುರ್ಬಳಕೆ: ಪ್ರಕರಣ

**ಬೆಂಗಳೂರು:** ಪಾಸ್ ನವೀಕರಣದ ಹಣವನ್ನು ಪಾವತಿಸದೆ ₹ 2.82 ಲಕ್ಷ ವಂಚಿಸಿದ ಆರೋಪದ ಮೇಲೆ ಬಿಎಂಟಿಸಿಯ ಮೂವರು ಸಂಚಾರ ನಿಯಂತ್ರಕರು (ಟಿ.ಸಿ) ಮತ್ತು ಚಾಲಕನ ವಿರುದ್ಧ ಇಲ್ಲಿನ ಉಪ್ಪಾರಪೇಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕತ್ತರಿಗುಪ್ಪೆ ಬೈರತಿ ಬಂಡೆ ಮತ್ತು ಕೆಂಪೇಗೌಡ ಬಸ್ ನಿಲ್ದಾಣದ ಸಂಚಾರ ನಿಯಂತ್ರಕರಾದ ಪೂರ್ಣಚಂದ್ರ, ಶ್ರೀನಿವಾಸ ಗೌಡ ಮತ್ತು ರಮೇಶ್ ಕೆ.ಟಿ ಹಾಗೂ ಚಾಲಕ ಸಿದ್ದಲಿಂಗಯ್ಯ ವಿರುದ್ಧ ವಂಚನೆ, ಫೋರ್ಜರಿ ಪ್ರಕರಣ ದಾಖಲಾಗಿದೆ. ಬಿಎಂಟಿಸಿ ವಿಭಾಗೀಯ ಭದ್ರತಾ ಅಧಿಕಾರಿ ಶ್ರವಣ್ ಕುಮಾರ್ ಜಿ.ಎಸ್ ಎಂಬುವರು ದೂರು ನೀಡಿದ್ದಾರೆ.

'2018–19ನೇ ಸಾಲಿನಲ್ಲಿ ನವೀಕರಿಸಿದ್ದ ಕೆಲವು ವಿದ್ಯಾರ್ಥಿ ಪಾಸ್‌ಗಳಿಂದ ಬಂದ ಹಣವನ್ನು ಇಲಾಖೆಗೆ ಸಂದಾಯ ಮಾಡದಿರುವ ಬಗ್ಗೆ ಅನುಮಾನವಿತ್ತು. ವಿಚಾರಣೆಗೆ ಸಮಿತಿ ರಚಿಸಲಾಗಿತ್ತು. ಸುಮಾರು 183 ವಿದ್ಯಾರ್ಥಿಗಳ ಪಾಸ್ ನವೀಕರಿಸಿದ್ದ ಹಣವನ್ನು ಅಧಿಕಾರಿಗಳು ಸಂದಾಯ ಮಾಡಿರಲಿಲ್ಲ. ಈ ಬಗ್ಗೆ ವಿಚಾರಿಸಿದಾಗ ಆನ್‌ಲೈನ್‌ನಲ್ಲಿ ಪಾವತಿ ಆಗಿದೆ ಎಂಬ ಉತ್ತರ ಬಂದಿತ್ತು' ಎಂದು ದೂರಿನಲ್ಲಿ ತಿಳಿಸಲಾಗಿದೆ.

### ಕೆಪಿಸಿಸಿ ನಿಯೋಜಿತ ಅಧ್ಯಕ್ಷ ಡಿ.ಕೆ.ಶಿವಕುಮಾರ್

'ಅಂತರ ಕಾಯ್ದುಕೊಂಡು, ದೇಶದ ಹಾಗೂ ಪಕ್ಷದ ಬಾವುಟ ಹಾರಿಸಿ ಟಿವಿಯಲ್ಲಿ ನೇರ ಪ್ರಸಾರ ಮಾಡಿಸಲಾಗುವುದು'

## 'ಪದಗ್ರಹಣ' ಮುಂದೂಡಿಕೆ

**ಬೆಂಗಳೂರು:** 'ಕೇಂದ್ರ ಹಾಗೂ ರಾಜ್ಯ ಸರ್ಕಾರದ ಹೊಸ ಮಾರ್ಗಸೂಚಿ ಅನ್ವಯ ಇದೇ 8ರವರೆಗೆ ಯಾವುದೇ ರಾಜಕೀಯ ಸಭೆಗಳನ್ನು ನಡೆಸಲು ಅವಕಾಶ ಇಲ್ಲ. ಹೀಗಾಗಿ, ಇದೇ 7ರಂದು ನಡೆಸಲು ಉದ್ದೇಶಿಸಿದ್ದ ಪದಗ್ರಹಣ ಕಾರ್ಯಕ್ರಮ ಮುಂದೂಡಲಾಗಿದೆ' ಎಂದು ಕೆಪಿಸಿಸಿ ನಿಯೋಜಿತ ಅಧ್ಯಕ್ಷ ಡಿ.ಕೆ. ಶಿವಕುಮಾರ್ ತಿಳಿಸಿದರು.

'7ರಂದು ಕಾರ್ಯಕ್ರಮ ನಡೆಸಲು ಅನುಮತಿ ನೀಡುವಂತೆ ಮುಖ್ಯಮಂತ್ರಿ ಮತ್ತು ಪೊಲೀಸ್ ಕಮಿಷನರ್‌ಗೆ ಮನವಿ ಮಾಡಿದ್ದೆವು. ಹೊಸ ಮಾರ್ಗಸೂಚಿ ಹೊರಡಿಸಿರುವುದರ ಹಿಂದೆ ರಾಜಕೀಯ ಹುನ್ನಾರವಿದೆ' ಎಂದೂ ದೂರಿದರು.



'ಬೆಂಗಳೂರಿನಲ್ಲಿ 150 ಮಂದಿ ಸೇರಿ ಕಾರ್ಯಕ್ರಮ ಮಾಡುತ್ತೇವೆ. ಉಳಿದಂತೆ, ಎಲ್ಲ ಗ್ರಾಮ ಪಂಚಾಯಿತಿಗಳು ಮತ್ತು ವಾರ್ಡ್‌ಗಳು ಸೇರಿ ಸುಮಾರು 7,800 ಕಡೆಗಳಲ್ಲಿ ಏಕಕಾಲದಲ್ಲಿ 'ವಂದೇ ಮಾತರಂ' ಗೀತೆಯಿಂದ ಆರಂಭಿಸಿ ಸಂವಿಧಾನದ ಪೀಠಿಕೆ ವಾಚನದೊಂದಿಗೆ ಪ್ರತಿಜ್ಞೆ ತೆಗೆದುಕೊಳ್ಳಲಾಗುವುದು' ಎಂದರು.

'ಜೂಮ್' ಮೂಲಕವೂ ವೀಕ್ಷಿಸಬಹುದು. ಕಾಂಗ್ರೆಸ್ ಕಾರ್ಯಕರ್ತರು, ಹಿತೈಷಿಗಳು ಮನೆಯಲ್ಲೇ ಕುಳಿತು ಮಿಸ್ಡ್ ಕಾಲ್ (7676366666) ನೀಡುವ ಮೂಲಕ ಭಾಗವಹಿಸಬಹುದು' ಎಂದರು.

# ಕಿರುತೆರೆ ನಟಿ ಆತ್ಮಹತ್ಯೆ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ತನ್ನನ್ನು ಪ್ರೀತಿಸುತ್ತಿದ್ದ ಪ್ರಿಯಕರ ಮದುವೆಯಾಗದೆ ವಂಚಿಸಿದನೆಂಬ ಕಾರಣಕ್ಕೆ ನೊಂದಿದ್ದರು ಎನ್ನಲಾದ ಕಿರುತೆರೆ ಸಹ ನಟಿ ವಿ.ಕೆ. ಚಂದನಾ (29) ವಿಷ ಕುಡಿದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

'ತಾವರಕೆರೆ ಮುಖ್ಯರಸ್ತೆಯ ಕೃಷ್ಣಮೂರ್ತಿ ಲೇಔಟ್‌ನಲ್ಲಿರುವ ಮನೆಯಲ್ಲಿ ವಾಸವಿದ್ದ ಚಂದನಾ, ಮೇ 30ರಂದು ಲೈವ್ ವಿಡಿಯೊ ಮಾಡಿ ಆತ್ಮಹತ್ಯೆಗೆ ಶರಣಾಗಿದ್ದಾರೆ. ಚಂದನಾ ಅವರ ಪ್ರಿಯಕರ ದಿನೇಶ್ ಹಾಗೂ ಆತನ ಕುಟುಂಬಸ್ಥರ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ಆರೋಪಿಗಳು ತಲೆಮರೆಸಿಕೊಂಡಿದ್ದಾರೆ' ಎಂದು ಸುದ್ದಗುಂಟೆಪಾಳ್ಯ ಪೊಲೀಸರು ಹೇಳಿದರು.

'ರೂಪದರ್ಶಿಯಾಗಿದ್ದ ಚಂದನಾ, ರಂಗಭೂಮಿ ಹಾಗೂ ಕಿರುತೆರೆಯಲ್ಲೂ ಗುರುತಿಸಿಕೊಂಡಿದ್ದರು. ಚುಕ್ಕಿ ಎಂದೇ ಖ್ಯಾತಿ ಪಡೆದಿದ್ದರು. ಜೊತೆಗೆ, ಖಾಸಗಿ ಕಂಪನಿಯೊಂದರಲ್ಲಿ ಕೆಲಸ ಸಹ ಮಾಡುತ್ತಿದ್ದರು. ಅವರ ಆತ್ಮಹತ್ಯೆ ಸಂಬಂಧ ತಂದೆ ಕುಮಾರೇಗೌಡ ದೂರು ನೀಡಿದ್ದಾರೆ.'

'ಚಂದನಾ ಹಾಗೂ ಸಹೋದ್ಯೋಗಿಯೇ ಆಗಿದ್ದ ಆರೋಪಿ ದಿನೇಶ್ ಐದು ವರ್ಷಗಳ ಹಿಂದೆ ಪರಿಚಯವಾಗಿದ್ದರು. ನಂತರ, ಸಲುಗೆ ಬೆಳೆದು ಪ್ರೀತಿಸಲಾರಂಭಿಸಿದ್ದರು. ಪ್ರವಾಸ, ಹೋಟೆಲ್ ಎಂದು ಹಲವೆಡೆ ಸುತ್ತಾಡಿದ್ದರು. ಅವರಿಬ್ಬರ ನಡುವೆ ದೈಹಿಕ ಸಂಪರ್ಕವೂ ಇತ್ತು. ಈ ಸಂಗತಿ ದೂರಿನಲ್ಲಿದೆ' ಎಂದೂ ಪೊಲೀಸರು ತಿಳಿಸಿದರು.

'ಚಂದನಾ ಇತ್ತೀಚೆಗೆ ಗರ್ಭ ಧರಿಸಿದ್ದರು. ಮದುವೆಯಾಗುವುದಾಗಿ ಹೇಳಿದ್ದ ಆರೋಪಿ, ಒತ್ತಾಯದಿಂದಲೇ ಗರ್ಭಪಾತ ಮಾಡಿಸಿದ್ದ. ಜೊತೆಗೆ, ₹5 ಲಕ್ಷ ಪಡೆದಿದ್ದ. ಚಂದನಾ ಅವರನ್ನು ಕ್ರಮೇಣ ದೂರ ಮಾಡಲು ಯತ್ನಿಸಿದ್ದ ಆರೋಪಿ, ಮದುವೆಯಾಗುವುದಿಲ್ಲವೆಂದು ಹೇಳಿದ್ದ. ಈ ಬಗ್ಗೆ ಆತನ ಕುಟುಂಬಸ್ಥರಿಗೆ ಹೇಳಿದರೂ ಪ್ರಯೋಜನವಾಗಿರಲಿಲ್ಲ. ಇದರಿಂದ ನೊಂದು ಚಂದನಾ ಆತ್ಮಹತ್ಯೆ ಮಾಡಿಕೊಂಡಿದ್ದಾಳೆಂದು ದೂರಿನಲ್ಲಿ ತಂದೆ ಆರೋಪಿಸಿದ್ದಾರೆ' ಎಂದೂ ಹೇಳಿದರು.



ಆರೋಪಿ ದಿನೇಶ್ ಜೊತೆ ಚಂದನಾ

## ಮುಂದುವರಿದ ಪ್ರಭುಶಂಕರ್ ವಿಚಾರಣೆ

**ಬೆಂಗಳೂರು:** ಸಿಗರೇಟ್ ಮತ್ತು ಮಾಸ್ಕ್ ಲಂಚ ಪ್ರಕರಣದಲ್ಲಿ ಆರೋಪಿಯಾಗಿರುವ ಸಿಸಿಬಿಯ ಆರ್ಥಿಕ ಅಪರಾಧಗಳ ತಡೆ ವಿಭಾಗದ ಎಸಿಪಿ ಪ್ರಭುಶಂಕರ್ ಸೋಮವಾರವೂ ಎಸಿಬಿ ತನಿಖಾ ಅಧಿಕಾರಿಗಳ ಮುಂದೆ ಹಾಜರಾದರು.

'ಪ್ರಭುಶಂಕರ್ ಶುಕ್ರವಾರದಿಂದ ವಿಚಾರಣೆಗೆ ಹಾಜರಾಗುತ್ತಿದ್ದರೂ ತನಿಖಾಧಿಕಾರಿಗಳ ಜತೆ ಸರಿಯಾಗಿ ಸಹಕರಿಸುತ್ತಿಲ್ಲ. ಕೋರ್ಟ್‌ನಿಂದ ಮಧ್ಯಂತರ ಜಾಮೀನು ಪಡೆದಿರುವ ಅವರನ್ನು ನಾವೂ ಒತ್ತಾಯಪೂರ್ವಕವಾಗಿ ಪ್ರಶ್ನಿಸಲು ಆಗುತ್ತಿಲ್ಲ' ಎಂದು ಎಸಿಬಿ ಮೂಲಗಳು ತಿಳಿಸಿವೆ. ಲಾಕ್‌ಡೌನ್‌ನಲ್ಲಿ ದುಬಾರಿ ಬೆಲೆಗೆ ಸಿಗರೇಟ್ ಮಾರಾಟ ಮಾಡಲು ಅವಕಾಶ ಕೊಡಲು ವಿತರಕರಿಂದ ಲಂಚ ಪಡೆದ ಆರೋಪಕ್ಕೆ ಎಸಿಪಿ ಒಳಗಾಗಿದ್ದಾರೆ. ಎನ್– 95 ನಕಲಿ ಮಾಸ್ಕ್ ತಯಾರಿಸುತ್ತಿದ್ದ ಆರೋಪಿಯೊಬ್ಬರಿಗೆ ರಕ್ಷಣೆ ನೀಡಲು ಲಂಚ ಪಡೆದ ಆರೋಪವೂ ಇವರ ಮೇಲಿದೆ.

# ವಸತಿಗೆ ₹10,194 ಕೋಟಿ ಅನುದಾನ: ಬಿಎಸ್‌ವೈ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ರಾಜ್ಯದಲ್ಲಿ ನಿರ್ಮಾಣದ ವಿವಿಧ ಹಂತಗಳಲ್ಲಿರುವ 9.74 ಲಕ್ಷ ಮನೆಗಳನ್ನು ಪೂರ್ಣಗೊಳಿಸಲು ₹10,194 ಕೋಟಿ ಅನುದಾನದ ಮಂಜೂರಾತಿಗೆ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದ್ದಾರೆ.

ವಿಧಾನಸೌಧದಲ್ಲಿ ಸೋಮವಾರ ನಡೆದ ವಸತಿ ಇಲಾಖೆಯ ಪ್ರಗತಿ ಪರಿಶೀಲನೆ ಸಭೆಯಲ್ಲಿ ಅವರು ಈ ಭರವಸೆ ನೀಡಿದರು.

ನಕಲಿ ದಾಖಲೆಗಳನ್ನು ನೀಡಿ ಅಕ್ರಮವಾಗಿ ಮನೆ ಪಡೆದುಕೊಳ್ಳುವ ಪ್ರಕರಣಗಳನ್ನು ಪತ್ತೆ ಮಾಡಿ ಸರ್ಕಾರಕ್ಕೆ ₹8,000 ಕೋಟಿ ಉಳಿತಾಯ ಮಾಡಲಾಗಿದೆ. ಇದು ಶ್ಲಾಘನೀಯ ಕಾರ್ಯ. ವಸತಿ ಯೋಜನೆಗಳ ಪಾರದರ್ಶಕ ಅನುಷ್ಠಾನಕ್ಕೆ ತಾಂತ್ರಿಕ ನ್ಯೂನತೆಗಳನ್ನು ಸರಿಪಡಿಸಿ, ಅನುದಾನ ದುರುಪಯೋಗ ತಡೆಯಲು ಅಭಿವೃದ್ಧಿಪಡಿಸಿರುವ ವಿಜಿಲ್ ಆ್ಯಪ್ ತಂತ್ರಾಂಶ ಸದುಪಯೋಗಪಡಿಸಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಕೊಡಗು ಪುನರ್ವಸತಿ ಯೋಜನೆಯಡಿ 115 ಮನೆಗಳನ್ನು ಹಂಚಿಕೆ ಮಾಡಲಾಗಿದೆ. ಪೂರ್ಣಗೊಂಡಿರುವ 405 ಮನೆಗಳನ್ನು ಅತಿ ಬೇಗನೆ ಫಲಾನುಭವಿಗಳಿಗೆ ಹಸ್ತಾಂತರಿಸುವಂತೆಯೂ ಅಧಿಕಾರಿಗಳಿಗೆ ತಿಳಿಸಿದರು.

ಗ್ರಾಮೀಣ ಪ್ರದೇಶಗಳಲ್ಲಿ 1.24 ಲಕ್ಷ ನಿವೇಶನಗಳನ್ನು ಬಡವರಿಗೆ ವಿತರಿಸಲು ಗುರುತಿಸಲಾಗಿದೆ. ಇದಕ್ಕಾಗಿ ₹100 ಕೋಟಿ ಲಭ್ಯವಿದೆ. ನಿವೇಶನಗಳನ್ನು ಅಭಿವೃದ್ಧಿಪಡಿಸಿ ಹಂಚಿಕೆ ಮಾಡಲು ಸುಮಾರು ₹1,000 ಕೋಟಿ ಅಗತ್ಯವಿದೆ ಎಂದು ವಸತಿ ಸಚಿವ ವಿ.ಸೋಮಣ್ಣ ಹೇಳಿದರು.

### '3ನೇ ಅವಧಿಗೂ ಮೋದಿಯೇ ಪ್ರಧಾನಿ'

**ಬೆಂಗಳೂರು:** 'ದೇಶವನ್ನು ಕಟ್ಟುವ ಕಾಯಕಕ್ಕೆ ತನ್ನನ್ನು ತಾನೇ ಸಮರ್ಪಿಸಿಕೊಂಡ 'ಉಕ್ಕಿನ ಮನುಷ್ಯ' ಪ್ರಧಾನಿ ನರೇಂದ್ರ ಮೋದಿ ಮೂರನೇ ಅವಧಿಯಲ್ಲೂ ಪ್ರಧಾನಿ ಆಗುತ್ತಾರೆ' ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹೇಳಿದರು.

ಮೋದಿ ಎರಡನೇ ಅವಧಿಗೆ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡು ವರ್ಷ ತುಂಬಿದ ಹಿನ್ನೆಲೆಯಲ್ಲಿ ಸೋಮವಾರ ಸುದ್ದಿಗೋಷ್ಠಿ ನಡೆಸಿದ ಯಡಿಯೂರಪ್ಪ, 'ಕಳೆದ ಒಂದು ವರ್ಷದಲ್ಲಿ ಮೋದಿ ಅವರ ಆಡಳಿತದ ಬಗ್ಗೆ ಜನರಲ್ಲಿ ಅಪಾರ ಮೆಚ್ಚುಗೆ ಇದೆ. ಸ್ವಾತಂತ್ರ್ಯ ಕಾಲದಿಂದಲೂ ಬಗೆಹರಿಯದ ಜ್ವಲಂತ ಸಮಸ್ಯೆಗಳನ್ನು ಬಗೆಹರಿಸಿದ್ದಾರೆ. ಈ ಕಾರಣಕ್ಕಾಗಿ ಮೂರನೇ ಅವಧಿಗೂ ಪ್ರಧಾನಿ ಆಗಬೇಕು ಎಂಬುದು ಜನರ ಬಯಕೆ' ಎಂದರು.

'ಎರಡನೇ ಅವಧಿಯಲ್ಲಿ ಸುವರ್ಣಾಕ್ಷರಗಳಲ್ಲಿ ಬರೆದಿಡುವ ಕೆಲಸ ಮಾಡಿದ್ದಾರೆ. ಜಮ್ಮು–ಕಾಶ್ಮೀರದ ವಿಶೇಷ ಸ್ಥಾನಮಾನ ರದ್ದು, ತ್ರಿವಳಿ ತಲಾಖ್ ರದ್ದು, ರಾಮಮಂದಿರ ಸಮಸ್ಯೆ ಇತ್ಯರ್ಥ, ಪೌರತ್ವ ಕಾಯ್ದೆಗೆ ತಿದ್ದುಪಡಿ, ಒಂದು ದೇಶ ಒಂದು ಪಡಿತರ ಚೀಟಿ, ರೈತರ ಆದಾಯ ದ್ವಿಗುಣಗೊಳಿಸಲು ಕೃಷಿ ಮಾರುಕಟ್ಟೆ ಕಾಯ್ದೆಗೆ ತಿದ್ದುಪಡಿ ಪ್ರಮುಖವಾದವು' ಎಂದು ಹೇಳಿದರು.

## ಭೂಸ್ವಾಧೀನ: ಯಥಾಸ್ಥಿತಿಗೆ ಸುಪ್ರೀಂ ಕೋರ್ಟ್ ಆದೇಶ

**ನವದೆಹಲಿ:** ನಗರದ ಬನಶಂಕರಿ ಬಡಾವಣೆಯಲ್ಲಿ ಹಿರಿಯ ನಾಗರಿಕರೊಬ್ಬರಿಗೆ ಸೇರಿರುವ ನಿವೇಶನವನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ಸ್ವಾಧೀನಪಡಿಸಿಕೊಂಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ತಕ್ಷಣದಿಂದಲೇ ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ಸುಪ್ರೀಂ ಕೋರ್ಟ್ ಸೋಮವಾರ ಆದೇಶಿಸಿದೆ.

ತಮಗೆ ಸೇರಿರುವ 63,000 ಚದರ ಅಡಿ ಭೂಮಿಯ ಸ್ವಾಧೀನ ಪ್ರಕ್ರಿಯೆಯು ಅಕ್ರಮ ಎಂದು ದೂರಿ ಪಿ.ಜಿ. ಬೆಳ್ಳಿಯಪ್ಪ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ್ದ ರಾಜ್ಯ ಹೈಕೋರ್ಟ್, ಅರ್ಜಿದಾರರಿಗೆ ಭೂಮಿಯನ್ನು ವಾಪಸ್ ನೀಡಬೇಕು ಇಲ್ಲವೇ ಸಮರ್ಪಕ ಪರಿಹಾರ ವಿತರಿಸಬೇಕು ಎಂದು ಬಿಡಿಎಗೆ ಸೂಚಿಸಿ ಕಳೆದ ನವೆಂಬರ್‌ನಲ್ಲಿ ಆದೇಶ ಹೊರಡಿಸಿತ್ತು.

ಈ ಆದೇಶ ಪ್ರಶ್ನಿಸಿ ಬಿಡಿಎ ಸಲ್ಲಿಸಿರುವ ಮೇಲ್ಮನವಿಯ ವಿಚಾರಣೆ ನಡೆಸಿದ ನ್ಯಾಯಪೀಠ, ಪ್ರಕರಣದ ವಿಸ್ತೃತ ವಿಚಾರಣೆ ನಡೆಸುವುದಾಗಿ ತಿಳಿಸಿ ಯಥಾಸ್ಥಿತಿಗೆ ಆದೇಶಿಸಿದೆ. ಅಲ್ಲದೆ, ಈ ಕುರಿತು ನಾಲ್ಕು ವಾರಗಳಲ್ಲಿ ಪ್ರತಿಕ್ರಿಯೆ ನೀಡುವಂತೆ ಬೆಳ್ಳಿಯಪ್ಪ ಅವರಿಗೆ ನೋಟಿಸ್ ಜಾರಿ ಮಾಡಿದೆ.

**ಟೀಂಲೀಸ್ ಸರ್ವೀಸಸ್ ಲಿಮಿಟೆಡ್**

CIN: L74140KA2000PLC118395

6ನೇ ಮಹಡಿ, ಬಿಎಂಟಿಸಿ ವಾಣಿಜ್ಯ ಸಂಕೀರ್ಣ, 80 ಅಡಿ ರಸ್ತೆ, ಕೋರಮಂಗಲ, ಬೆಂಗಳೂರು, ಕರ್ನಾಟಕ – 560095,

ಭಾರತ ದೂರವಾಣಿ: +91 80 68243000 ಫ್ಯಾಕ್ಸ್: +91 80 68243001

corporateaffairs@teamlease.com | www.teamleasegroup.com

**ನಿರ್ದೇಶಕರುಗಳ ಸಭೆಯ ನೋಟೀಸು**

ಈ ಮೂಲಕ ನೋಟೀಸು ನೀಡಲಾಗುತ್ತಿರುವುದೇನೆಂದರೆ, ಸೆಕ್ಯೂರಿಟೀಸ್ ಆ್ಯಂಡ್ ಎಕ್ಸ್‌ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ) ಲಿಸ್ಟಿಂಗ್ ಆಬ್ಲಿಗೇಶನ್ಸ್ ಆ್ಯಂಡ್ ಡಿಸ್‌ಕ್ಲೋಸರ್ ರಿಕ್ವೈರ್‌ಮೆಂಟ್ಸ್ (ಎಲ್‌ಒಡಿಆರ್), 2015, ನಿಬಂಧನೆಗಳ 47(1)(ಎ)ರ ನಿಬಂಧನೆಯ ಅನುಸಾರ, ಕಂಪನಿಯ ನಿರ್ದೇಶಕರುಗಳ ಸಭೆಯನ್ನು ಮಂಗಳವಾರ, ಜೂನ್ 09, 2020 ರಂದು ಭಾರತೀಯ ಕಾಲಮಾನ ಮಧ್ಯಾಹ್ನ 1:00 ಗಂಟೆಗೆ ಮಾರ್ಚ್ 31, 2020 ರಂದು ತ್ರೈಮಾಸಿಕ ಮತ್ತು ವರ್ಷಕ್ಕೆ ಕೊನೆಗೊಂಡ ಒಗ್ಗೂಡಿತ ಪರಿಶೋಧಿತ, ಪ್ರತ್ಯೇಕಿತ ಆರ್ಥಿಕ ಫಲಿತಾಂಶಗಳನ್ನು ಮತ್ತು ಇತರ ಅಂಶಗಳ ಜೊತೆಯಲ್ಲಿ ಪರಿಗಣಿಸುವ ಸಲುವಾಗಿ ನಡೆಸಲಾಗುತ್ತದೆ.


ನಿರ್ದೇಶಕರುಗಳ ಸಭೆಯ ನೋಟೀಸಿನ ಮಾಹಿತಿಯು ಕಂಪನಿಯ ವೆಬ್‌ಸೈಟ್ www.teamleasegroup.com ನಲ್ಲಿ ಹಾಗೂ ಬಿಎಸ್‌ಇ ಲಿಮಿಟೆಡ್ ವೆಬ್‌ಸೈಟ್ www.bseindia.com ಮತ್ತು ನ್ಯಾಶನಲ್ ಸ್ಟಾಕ್ ಎಕ್ಸ್‌ಚೆಂಜ್ ಆಫ್ ಇಂಡಿಯಾ ಲಿಮಿಟೆಡ್‌ನ ವೆಬ್‌ಸೈಟ್ www.nseindia.com ಇಲ್ಲಿ ಕೂಡ ಲಭ್ಯವಿದೆ.

ಟೀಂಲೀಸ್ ಸರ್ವೀಸಸ್ ಲಿಮಿಟೆಡ್ ಪರವಾಗಿ
ಸಹಿ/–
ಅಲಕ ಚಂದ
ಕಂಪನಿ ಸೆಕ್ರಟರಿ ಮತ್ತು ಕಂಪ್ಲೈಯನ್ಸ್ ಆಫೀಸರ್

ಸ್ಥಳ: ಬೆಂಗಳೂರು
ದಿನಾಂಕ: ಜೂನ್ 01, 2020

## 'ರೊಟ್ಟಿ ತಿಂದು ಅಭಿವೃದ್ಧಿ ಚರ್ಚೆ'

**ಮೈಸೂರು:** 'ರಾಜ್ಯ ಸರ್ಕಾರ ಸುಭದ್ರವಾಗಿದೆ. ಹೊರಗಿನಿಂದ ಶಾಸಕರನ್ನು ಕರೆದುಕೊಂಡು ಬಂದು ಆಡಳಿತ ನಡೆಸುವ ಅಗತ್ಯ ನಮಗಿಲ್ಲ' ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ನಳಿನ್ ಕುಮಾರ್ ಕಟೀಲ್ ಸೋಮವಾರ ತಿಳಿಸಿದರು.



'ನಮ್ಮ ಪಕ್ಷದ ಶಾಸಕರು ಪ್ರತ್ಯೇಕ ಸಭೆ ನಡೆಸಿಲ್ಲ. ರೊಟ್ಟಿ ತಿನ್ನಲು ಒಂದೆಡೆ ಸೇರಿ ಅಭಿವೃದ್ಧಿ ವಿಚಾರ ಚರ್ಚಿಸಿದ್ದಾರೆ. ಯಾರೂ ಯಾವುದೇ ಬೇಡಿಕೆ ಇಟ್ಟಿಲ್ಲ. ಯಾರನ್ನೂ ಬ್ಲ್ಯಾಕ್‌ಮೇಲ್ ಮಾಡುತ್ತಿಲ್ಲ. ಅಶಿಸ್ತಿಗೆ ನಮ್ಮ ಪಕ್ಷದಲ್ಲಿ ಅವಕಾಶ ಇಲ್ಲ. ಅಂಥ ಸಂದರ್ಭ ಬಂದರೆ ಶಿಸ್ತು ಕ್ರಮ ಜರುಗಿಸಲಾಗುವುದು' ಎಂದರು.

## ಕಾರ್ಯಾಧ್ಯಕ್ಷರ ಎದುರೇ ಕಾಂಗ್ರೆಸ್ ಕಾರ್ಯಕರ್ತರ ಕಚ್ಚಾಟ

**ಹಾಸನ:** ಕೆಪಿಸಿಸಿ ಅಧ್ಯಕ್ಷರ ಪದಗ್ರಹಣ ಹಿನ್ನೆಲೆಯಲ್ಲಿ ಕರೆದಿದ್ದ ಪೂರ್ವಸಿದ್ಧತಾ ಸಭೆಯಲ್ಲಿ ಅಲ್ಪ ಸಂಖ್ಯಾತ ಮುಖಂಡರ ಹೆಸರು ಪ್ರಸ್ತಾಪಿಸಲಿಲ್ಲವೆಂಬ ಕಾರಣಕ್ಕೆ ಕಾರ್ಯಾಧ್ಯಕ್ಷ ಸಲೀಂ ಅಹ್ಮದ್ ಎದುರೇ ಕಾರ್ಯಕರ್ತರು ಕಚ್ಚಾಡಿ, ಪರಸ್ಪರ ಕೈ ಕೈ ಮಿಲಾಯಿಸಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ ಕೆಪಿಸಿಸಿ ಸದಸ್ಯ ಎಚ್.ಕೆ.ಮಹೇಶ್ ಸ್ವಾಗತ ಭಾಷಣ ಮುಗಿಸುತ್ತಿದ್ದಂತೆ ಗಲಾಟೆ ಆರಂಭವಾಯಿತು.

'ವೋಟ್ ಹಾಕೋಕೆ ನಾವು ಬೇಕು. ನಮ್ಮ ನಾಯಕರ ಹೆಸರು ಹೇಳಲು ಏಕೆ ಮುಜುಗರ' ಎಂದು ಮುಖಂಡ ಅಬ್ದುಲ್ ಹಾದಿ ಆಕ್ರೋಶ ವ್ಯಕ್ತಪಡಿಸಿದರು. ಸಭೆ ನಡೆಸುವ ಅಗತ್ಯವಿಲ್ಲ ಎಂದು ಇತರರು ಕೂಗಿದರು.

## 4 ವರ್ಷದ ಮಗುವಿಗೆ ಪಿತ್ತಜನಕಾಂಗ ಕಸಿ ಯಶಸ್ವಿ

**ಬೆಂಗಳೂರು:** ಪಿತ್ತಜನಕಾಂಗ ಸಮಸ್ಯೆಯಿಂದ ಬಳಲುತ್ತಿದ್ದ 4 ವರ್ಷದ ಹೆಣ್ಣು ಮಗುವಿಗೆ ನಗರದ ಆಸ್ಟರ್ ಸಿಎಂಐ ಆಸ್ಪತ್ರೆ ವೈದ್ಯರ ತಂಡ ನಡೆಸಿದ ಕಸಿ ಶಸ್ತ್ರಚಿಕಿತ್ಸೆ ಯಶಸ್ವಿಯಾಗಿದೆ. ತಾಯಿಯ ಯಕೃತ್ತನ್ನೇ ಮಗುವಿಗೆ ಕಸಿ ಮಾಡಲಾಯಿತು. ವೆಲ್ಲೂರಿನ ಮಗು ತೀವ್ರ ಜ್ವರದಿಂದ ಬಳಲಿತ್ತು. ಪೋಷಕರು ಸ್ಥಳೀಯ ವೈದ್ಯರಲ್ಲಿ ತಪಾಸಣೆ ಮಾಡಿಸಿದಾಗ ಹೊಟ್ಟೆಯಲ್ಲಿ ಲಘುವಾದ ಊತವಿರುವುದು ಪತ್ತೆಯಾಗಿತ್ತು. ಹೆಚ್ಚಿನ ಚಿಕಿತ್ಸೆಗೆ ಸಿಎಂಐ ಆಸ್ಪತ್ರೆಗೆ ಶಿಫಾರಸು ಮಾಡಲಾಯಿತು.



ನಗರದ ವಿಭೂತಿಪುರ ವೀರಸಿಂಹಾಸನ ಸಂಸ್ಥಾನ ಮಠದ ಮಹಾಂತಲಿಂಗ ಶಿವಾಚಾರ್ಯ ಸ್ವಾಮೀಜಿ ಅವರ ಜನ್ಮದಿನದ ಅಂಗವಾಗಿ ಭಕ್ತರು ಕಾಣಿಕೆಯಾಗಿ ನೀಡಿದ ₹5 ಲಕ್ಷ ಮೊತ್ತವನ್ನು ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ನೀಡಲು ಸಂಗ್ರಹಿಸಲಾಯಿತು. ಇದೇ ವೇಳೆ ಅರ್ಚಕರು ಹಾಗೂ ಕೊರೊನಾ ನಿಯಂತ್ರಣಕ್ಕೆ ಸೇವೆ ಸಲ್ಲಿಸುತ್ತಿರುವ ಆರೋಗ್ಯ ಕಾರ್ಯಕರ್ತರಿಗೆ ದಿನಸಿ ನೀಡಿ ಗೌರವಿಸಲಾಯಿತು. ಪಾಲಿಕೆ ಸದಸ್ಯ ನಾಗರಾಜ, ಸಿದ್ಧಲಿಂಗಯ್ಯ, ಎಸ್.ಕೃಷ್ಣಪ್ಪ, ವೆಂಕಟಸ್ವಾಮಿ ರೆಡ್ಡಿ ಮತ್ತು ಮಹೇಂದ್ರ ಮೋದಿ ಇದ್ದರು

### ಸಂಕ್ಷಿಪ್ತ ಸುದ್ದಿ

## ಕುಡಿದ ಅಮಲಿನಲ್ಲಿ ಜಗಳ: ಸ್ನೇಹಿತನ ಕೊಲೆ

**ಬೆಂಗಳೂರು:** ಕುಡಿದ ಅಮಲಿನಲ್ಲಿ ಕ್ಷುಲ್ಲಕ ಕಾರಣಕ್ಕಾಗಿ ಸ್ನೇಹಿತರ ನಡುವೆ ಜಗಳವಾಗಿದ್ದು, ಮಣಿ ಎಂಬುವರನ್ನು ಕೊಲೆ ಮಾಡಲಾಗಿದೆ.

'ಕೆಂಗೇರಿ ಠಾಣೆ ವ್ಯಾಪ್ತಿಯಲ್ಲಿ ಭಾನುವಾರ ರಾತ್ರಿ ಈ ಘಟನೆ ನಡೆದಿದೆ. ಕೃತ್ಯ ಎಸಗಿರುವ ಸ್ನೇಹಿತರು ಸ್ಥಳದಿಂದ ಪರಾರಿಯಾಗಿದ್ದಾರೆ' ಎಂದು ಪೊಲೀಸರು ಹೇಳಿದರು.

'ಸ್ಥಳೀಯ ನಿವಾಸಿಯಾದ ಮಣಿ ಹಾಗೂ ಸ್ನೇಹಿತರು ಮದ್ಯದ ಪಾರ್ಟಿ ಮಾಡಲೆಂದು ಕೊಠಡಿಯೊಂದಕ್ಕೆ ಹೋಗಿದ್ದರು. ಅಲ್ಲಿ ಅವರೆಲ್ಲ ಮದ್ಯ ಕುಡಿದಿದ್ದರು. ಇದೇ ಸಂದರ್ಭದಲ್ಲೇ ಮಾತಿಗೆ ಮಾತು ಬೆಳೆದು ಜಗಳ ಶುರುವಾಗಿತ್ತು.'

'ಪರಿಸ್ಥಿತಿ ವಿಕೋಪಕ್ಕೆ ಹೋಗುತ್ತಿದ್ದಂತೆ ಮಣಿ ಮೇಲೆ ದಾಳಿ ಮಾಡಿದ್ದ ಆರೋಪಿಗಳು ಕೊಲೆ ಮಾಡಿದ್ದರು. ತೀವ್ರ ರಕ್ತಸ್ರಾವದಿಂದ ಮಣಿ ಸ್ಥಳದಲ್ಲಿ ಅಸುನೀಗಿದ್ದಾರೆ' ಎಂದೂ ಪೊಲೀಸರು ತಿಳಿಸಿದರು.

## ಅಪಘಾತ: ವ್ಯಕ್ತಿ ಸಾವು

**ದಾಬಸ್‌ಪೇಟೆ:** ಇಲ್ಲಿನ ಮಧುಗಿರಿ ರಸ್ತೆಯ ಇಮಚೇನಹಳ್ಳಿ ಗೇಟ್ ಬಳಿ ಸೋಮವಾರ ಬೆಳಿಗ್ಗೆ ಸಂಭವಿಸಿದ ಅಪಘಾತದಲ್ಲಿ ಬೈಕ್ ಸವಾರ ಸೋಮಶೇಖರಯ್ಯ (55) ಎಂಬುವರು ಮೃತಪಟ್ಟಿದ್ದಾರೆ.

ಎಲೆರಾಂಪುರದ ಸೋಮಶೇಖರಯ್ಯ ಬೈಕ್‌ನಲ್ಲಿ ಮಧುಗಿರಿಯಿಂದ ಬರುತ್ತಿದ್ದಾಗ ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿ ಹೊಡೆದಿದ್ದರಿಂದ ಸ್ಥಳದಲ್ಲಿಯೇ ಮೃತಪಟ್ಟರು ಎಂದು ಪ್ರತ್ಯಕ್ಷದರ್ಶಿಗಳು ಹೇಳಿದ್ದಾರೆ. ದಾಬಸ್‌ಪೇಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ದ್ವೇಷ ಭಾಷಣ: ಅರ್ಜಿ ವಜಾ

**ಬೆಂಗಳೂರು:** 'ನಿರ್ದಿಷ್ಟ ಸಮುದಾಯವನ್ನು ಗುರಿಯಾಗಿಸಿಕೊಂಡು ದ್ವೇಷ ಭಾಷಣಗಳ ವರದಿ ಪ್ರಸಾರ ಮಾಡುತ್ತಿರುವ ಸುದ್ದಿ ಮಾಧ್ಯಮ ಹಾಗೂ ಅಂತಹ ಭಾಷಣಕಾರರ ವಿರುದ್ಧ ಕಾನೂನು ಕ್ರಮ ಜರುಗಿಸಲು ಸಂಬಂಧಿತ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನ ನೀಡಬೇಕು' ಎಂದು ಕೋರಿದ್ದ ಅರ್ಜಿಯನ್ನು ಹೈಕೋರ್ಟ್ ವಜಾ ಮಾಡಿದೆ.

ಈ ಕುರಿತಂತೆ ಜನಾಂದೋಲನ ಸಂಸ್ಥೆ ಹಾಗೂ 'ಕ್ಯಾಂಪೇನ್ ಎಗೆನೆಸ್ಟ್ ಹೇಟ್ ಸ್ಪೀಚ್' ವೇದಿಕೆಯ ಎ.ಆರ್. ವಾಸವಿ ಮತ್ತು ಸ್ವಾತಿ ಶೇಷಾದ್ರಿ ಅರ್ಜಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ್ದ ನ್ಯಾಯಮೂರ್ತಿ ಬಿ.ವಿ. ನಾಗರತ್ನ ಹಾಗೂ ನ್ಯಾಯಮೂರ್ತಿ ಎಂ.ಜಿ. ಉಮಾ ಅವರಿದ್ದ ವಿಭಾಗೀಯ ನ್ಯಾಯಪೀಠ ಈ ಅರ್ಜಿಯನ್ನು ಕಳೆದ ತಿಂಗಳು 13ರಂದು ವಜಾಗೊಳಿಸಿದೆ.

'ಪ್ರಸ್ತುತ ಸಂದರ್ಭದಲ್ಲಿ ದ್ವೇಷ ಭಾಷಣ ಎಂಬ ಪರಿಕಲ್ಪನೆಯ ಕುರಿತು ಶಾಸನ ರಚಿಸುವುದು ಸೂಕ್ತವೆಂದು ಸಂಸತ್ತು ಇನ್ನೂ ಯೋಚಿಸಿಲ್ಲ. ಈ ಕುರಿತು ಇನ್ನೂ ಯಾವುದೇ ವ್ಯಾಖ್ಯಾನವೇ ಇಲ್ಲ. ಹೀಗಿರುವಾಗ ಕೋರ್ಟ್ ನಿರ್ದೇಶನ ನೀಡಲು ಸಾಧ್ಯವಿಲ್ಲ' ಎಂದು ನ್ಯಾಯಪೀಠ ಅರ್ಜಿ ವಜಾಕ್ಕೆ ಕಾರಣ ನೀಡಿದೆ.

ಹೆಚ್ಚುವರಿ ಅಡ್ವೊಕೇಟ್ ಜನರಲ್ ಆರ್. ಸುಬ್ರಹ್ಮಣ್ಯ ಹಾಗೂ ಟಿ.ಎಲ್. ಕಿರಣ್ ಕುಮಾರ್ ಸರ್ಕಾರದ ಪರ ವಾದ ಮಂಡಿಸಿದ್ದರು.

## ನೇಮಕ ಆದೇಶಕ್ಕೆ ಹೈಕೋರ್ಟ್ ತಡೆ

**ಬೆಂಗಳೂರು:** ಅಲಯನ್ಸ್ ವಿಶ್ವವಿದ್ಯಾಲಯದ ಮಾಜಿ ಕುಲಪತಿ ಅಯ್ಯಪ್ಪ ದೊರೆ ಸುಪಾರಿ ಕೊಲೆ ಪ್ರಕರಣದಲ್ಲಿ ಸಿ.ಎಚ್.ಹನುಮಂತರಾಯ ಅವರನ್ನು ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್ (ಎಸ್‌ಪಿಪಿ) ಆಗಿ ನೇಮಕ ಮಾಡಿದ್ದ ಸರ್ಕಾರದ ಆದೇಶಕ್ಕೆ ಹೈಕೋರ್ಟ್ ತಡೆ ನೀಡಿದೆ.

ಈ ಕುರಿತಂತೆ ಪ್ರಕರಣದ ಪ್ರಮುಖ ಆರೋಪಿ ಸುಧೀರ್ ಅಂಗೂರ್ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಕೆ.ಎಸ್. ಮುದಗಲ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಸೋಮವಾರ ವಿಚಾರಣೆ ನಡೆಸಿ, ಈ ಮಧ್ಯಂತರ ಆದೇಶ ನೀಡಿದೆ.

